ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜ ನಿ : ಸುಮಪ : 2020–21 ದಿನಾಂಕ : 21–08–2020

# ಪತ್ರಿಕಾ ಪ್ರಕಟಣೆ

## ಕೀ ಉತ್ತರ ಪ್ರಕಟ

ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 17–082020 ರಂದು ನಡೆಸಿದ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಹಾಯಕ ನಿಯಂತ್ರಕರು ಗ್ರೂಫ್ ಎ ವೃಂದದ 54 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ **http://kpsc.kar.nic.in** ನಲ್ಲಿ ಪ್ರಕಟಿಸಲಾಗಿದೆ.

ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು 560001 ಇವರಿಗೆ ದಿನಾಂಕ 27–08–2020 ರಂದು ಸಂಜೆ 5–30 ರೊಳಗಾಗಿ ತಲುಪುವಂತೆ ಈ ವಿಳಾಸಕ್ಕೆ ಮಾತ್ರ ಕಳುಹಿಸಿ ಕೊಡಬೇಕು. ಆಕ್ಷೇಪಣೆಗಳ ವಿವರಗಳನ್ನು ಕಡ್ಡಾಯವಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ನಮೂನೆಯಲ್ಲಿಯೇ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# <u>ಕೊಳಗೇರಿ ನಿವಾಸಿಗಳಿಗೆ ಹಕ್ಕುಪತ್ರ, ಐತಿಹಾಸಿಕ ನಿರ್ಣಯ – ಸಚಿವ ಸೋಮಣ್ಣ</u>

ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)

ರಾಜ್ಯದ ಕೊಳಗೇರಿ ನಿವಾಸಿಗಳಿಗೆ ಹಕ್ಕುಪತ್ರ ನೀಡುವ ಕುರಿತಾದ ವಸತಿ ಇಲಾಖೆಯ ಮಹತ್ವದ ಪ್ರಸ್ತಾವನೆಗೆ ಈ ದಿನ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆತಿದೆಯೆಂದು ವಸತಿ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ಶ್ರೀ ವಿ.ಸೋಮಣ್ಣ ನವರು ಕಳೆದ ವರ್ಷದ ಆಗಸ್ಟ್ 20 ರಂದು ಪ್ರಸ್ತುತ ಸರ್ಕಾರದಲ್ಲಿ ಸಚಿವರಾಗಿ ಅಧಿಕಾರ ವಹಿಸಿಕೊಂಡಿದ್ದು, ಇಂದಿಗೆ ಸರಿಯಾಗಿ ಒಂದು ವರ್ಷ ಪೂರ್ಣಗೊಂಡ ಸಂದರ್ಭದಲ್ಲಿಯೇ ಸುದೈವವೆಂಬಂತೆ ಸಮಾಜದ ಅತ್ಯಂತ ಕೆಳ ಹಾಗೂ ದುರ್ಬಲ ವರ್ಗದ ಜನರ ಬಹುದಿನದ ಕನಸನ್ನು ಈಡೇರಿಸುವ ಐತಿಹಾಸಿಕ ನಿರ್ಣಯವನ್ನು ಸಂಪುಟ ಸಭೆ ಕೈಗೊಂಡಿದ್ದಕ್ಕೆ ಹರ್ಷ ವ್ಯಕ್ತ ಪಡಿಸಿದ್ದಾರೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯೂ ಸೇರಿದಂತೆ ರಾಜ್ಯದ ವಿವಿಧ ಪಟ್ಟಣ ಪಂಚಾಯಿತಿ, ಪುರಸಭೆ, ನಗರ ಸಭೆ, ಮಹಾನಗರ ಪಾಲಿಕೆ ವ್ಯಾಪ್ತಿಯ ಸರ್ಕಾರಿ ಹಾಗೂ ಸ್ಥಳೀಯ ಸಂಸ್ಥೆಗಳ ಮಾಲೀಕತ್ವದಲ್ಲಿರುವ ಸುಮಾರು 6745 ಎಕರೆ ಜಮೀನಿನಲ್ಲಿ ಸ್ಥಿತಗೊಂಡಿರುವ 1873 ಕೊಳಚೆ ಪ್ರದೇಶಗಳ ಸುಮಾರು 3.13 ಲಕ್ಷ ಕುಟುಂಬಗಳಿಗೆ ಹಕ್ಕು ಪತ್ರ ನೀಡುವ ಪ್ರಸ್ತಾವನೆ ಇದಾಗಿದ್ದು, ರಾಜ್ಯದ ಸುಮಾರು 16 ಲಕ್ಷ ಕೊಳಗೇರಿ ನಿವಾಸಿಗಳಿಗೆ ಇದರಿಂದ ಪ್ರಯೋಜನವಾಗಲಿದೆ ಎಂದು ಈ ಸಂದರ್ಭದಲ್ಲಿ ಹೇಳಿದ್ದಾರೆ.

ಬಿ.ಬಿ.ಎಂ.ಪಿ.ವ್ಯಾಪ್ತಿಯಲ್ಲೇ ಸುಮಾರು 683 ಎಕರೆ ಸರ್ಕಾರಿ ಜಾಗದಲ್ಲಿ 239 ಕೊಳಚೆ ಪ್ರದೇಶಗಳಿದ್ದು, ಸುಮಾರು 50,000 ಕುಟುಂಬಗಳು ವಾಸಿಸುತ್ತಿವೆ. ಕೊಳಗೇರಿ ನಿವಾಸಿಗಳು ತಮ್ಮ ವಾಸಸ್ಥಳದ ಹಕ್ಕಿನಿಂದ ಹಲವಾರು ವರ್ಷಗಳಿಂದ ವಂಚಿತರಾಗಿರುವುದನ್ನು ಮನಗಂಡು ಇವರನ್ನು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಧೃಡರನ್ನಾಗಿಸಿ, ಸಮಾಜದ ಮುಖ್ಯವಾಹಿನಿಗೆ ತಂದು ಉತ್ತಮ ನಾಗರೀಕರಾಗಿ ಬದುಕಲು ಅವಕಾಶ ನೀಡುವ ಸದುದ್ದೇಶದಿಂದ ವಸತಿ, ನಗರಾಭಿವೃದ್ಧಿ, ಪೌರಾಡಳಿತ ಹಾಗೂ ಕಂದಾಯ ಇಲಾಖೆಯ ವಿವಿಧ ಹಂತದ ಅಧಿಕಾರಿಗಳೊಂದಿಗೆ ನಿರಂತರ ಚರ್ಚಿಸಿ, ಸಭೆ ನಡೆಸಿ ಈ ಪ್ರಸ್ತಾವನೆಗೆ ಒಂದು ತಾರ್ಕಿಕ ಅಂತ್ಯ ನೀಡಿರುವುದಕ್ಕೆ ತಮಗೆ ವೈಯುಕ್ತಿಕವಾಗಿ ಸಂತೋಷವಿದೆ ಎಂದು ತಿಳಿಸಿದ ಸಚಿವರು ಇದಕ್ಕಾಗಿ ಶ್ರಮಿಸಿದ ಸಂಬಂಧಪಟ್ಟ ಇಲಾಖಾಧಿಕಾರಿಗಳು ಹಾಗೂ ಸಚಿವರ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವ ಸೋಮಣ್ಣ, ತಮ್ಮೆಲ್ಲರ ಹೆಮ್ಮೆಯ ಹಾಗೂ ನೆಚ್ಚಿನ ಪ್ರಧಾನ ಮಂತ್ರಿಗಳಾದ ಸನ್ಮಾನ್ಯ ಶ್ರೀ ನರೇಂದ್ರ ಮೋದಿಯವರ ಆಶಯವಾದ "ಸರ್ವರಿಗೂ ಸೂರು" ಎಂಬ ಕಲ್ಪನೆಯನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಸಮಾಜದ ಅತ್ಯಂತ ಕೆಳ ಹಾಗೂ ದುರ್ಬಲ ವರ್ಗದ ಜನರೇ ಹೆಚ್ಚಾಗಿ ವಾಸಿಸುವ ಕೊಳಚೆ ಪ್ರದೇಶದ ನಿವಾಸಿಗಳ ಬಹುದಿನದ ಕನಸನ್ನು ಈಡೇರಿಸುವ ಐತಿಹಾಸಿಕ ನಿರ್ಣಯವನ್ನು ಕೈಗೊಂಡಿದ್ದಕ್ಕಾಗಿ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಿ.ಎಸ್.ಯಡಿಯೂರಪ್ಪ ನವರಿಗೆ, ಸಂಪುಟ ಸಹೋದ್ಯೋಗಿಗಳಿಗೆ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

**ಕೊಳಗೇರಿಯಲ್ಲಿ ವಾಸ ಮಾಡುವ ಎಲ್ಲಾ ಜನರು ಸರ್ಕಾರದ ಈ ಮಹತ್ವದ ನಿರ್ಧಾರದಿಂದಾದ ಪ್ರಯೋಜನವನ್ನು ಸದುಪಯೋಗಪಡಿಸಿಕೊಂಡು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಸಧೃಡರಾಗಿ ಸಮಾಜದ ಮುಖ್ಯವಾಹಿನಿಗೆ ಬರಲಿ ಎಂದೂ ಇದೇ ಸಂದರ್ಭದಲ್ಲಿ ಆಶಿಸಿದ್ದಾರೆ.**

## ಹೆಚ್ಚುವರಿ ಬಸ್ ಸೌಲಭ್ಯ

**ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 24.08.2020 ರಂದು ಗೆಜೆಟೆಡ್ ಪ್ರೋಬೆಷನರ್ಸ್ ಹುದ್ದೆಗಳ ಪೂರ್ವಭಾವಿ ಪರೀಕ್ಷೆಗಳನ್ನು ನಡೆಸುತ್ತಿದ್ದು, ಸದರಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಪರೀಕ್ಷೆಯ ಹಿಂದಿನ ದಿನ ಅಂದರೆ, ದಿನಾಂಕ 23.08.2020 ಮತ್ತು ಪರೀಕ್ಷೆ ದಿನ ದಿನಾಂಕ 24.08.2020 ರಂದು ಪ್ರಮುಖ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಿಂದ ಪರೀಕ್ಷೆ ನಡೆಯುವ ಕೇಂದ್ರ ಸ್ಥಾನಗಳಿಗೆ ಕೆಳಕಂಡಂತೆ ಅವಶ್ಯಕತೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆ ಸೌಲಭ್ಯವನ್ನು ಕಲ್ಪಿಸುತ್ತಿದೆ.

| ಕ್ರ.ಸಂ | ಮುಖ್ಯ ಪರೀಕ್ಷಾ ಕೇಂದ್ರಗಳಿರುವ ಜಿಲ್ಲೆಗಳು | ಮುಖ್ಯ ಪರೀಕ್ಷಾ ಕೇಂದ್ರಗಳಿಗೆ ಹೆಚ್ಚುವರಿಯಾಗಿ ಬಸ್ ಸೌಲಭ್ಯವನ್ನು ಕೆಳಕಂಡ ಜಿಲ್ಲೆಗಳ ಕೇಂದ್ರದಿಂದ ಮತ್ತು ಪ್ರಮುಖ ತಾಲ್ಲೂಕುಗಳಿಂದ ಕಲ್ಪಿಸಲಾಗುತ್ತಿದೆ. |
|---|---|---|
| 1 | ಬೆಂಗಳೂರು | ಬೆಂಗಳೂರು, ಚಿಕ್ಕಬಳ್ಳಾಪುರ, ಕೋಲಾರ, ರಾಮನಗರ ಮತ್ತು ತುಮಕೂರು |
| 2 | ದಾವಣಗೆರೆ | ದಾವಣಗೆರೆ ಮತ್ತು ಚಿತ್ರದುರ್ಗ |
| 3 | ಮಂಗಳೂರು | ಮಂಗಳೂರು ಮತ್ತು ಉಡುಪಿ |
| 4 | ಮೈಸೂರು | ಚಾಮರಾಜನಗರ, ಹಾಸನ, ಕೊಡಗು, ಮಂಡ್ಯ ಮತ್ತು ಮೈಸೂರು |
| 5 | ಶಿವಮೊಗ್ಗ | ಚಿಕ್ಕಮಗಳೂರು ಮತ್ತು ಶಿವಮೊಗ್ಗ |

ಸದರಿ ಸೌಲಭ್ಯವನ್ನು ಪರೀಕ್ಷೆ ಬರೆಯುವ ಅಭ್ಯರ್ಥಿಗಳು ಸದುಪಯೋಗ ಪಡೆಯಲು ಅಧಿಕೃತ ಪ್ರಕಟಣೆ ತಿಳಿಸಿದೆ.

# Additional Buses

Bengaluru, August 21 (Karnataka Information)

Karnataka Public Service Commission is conducting preliminary examination for the post of gazetted probationers on 24.08.2020. Karnataka State Road Transport Corporation will be operating extra buses as per the demand to facilitate the applicants to attend the examination from main Districts/ Taluks to head quarters of examination centers on previous day i.e, 23.08.2020 and on examination day i.e, 24.08.2020. The details are as below;

| Sl No | Main examination centers | Bus facilities will be provided from Taluk /Districts of these Districts |
|---|---|---|
| 1 | Bengaluru | Bengaluru, Chikkaballapura, Kolar, Ramanagara and Tumakuru |
| 2 | Davanagere | Chitradurga and Davanagere |
| 3 | Mangaluru | Mangaluru and Udupi |
| 4 | Mysuru | Chamarajanagar, Hassan, Kodagu, Mandya and Mysuru |
| 5 | Shivamogga | Chikkamagaluru and Shivamogga |

The candidates are requested to avail the above facilities says official press

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಸಾರ್ವಜನಿಕ ಉದ್ದಿಮೆ ಸಚಿವ ಜಗದೀಶ್ ಶೆಟ್ಟರ್ ಅವರು ಆಗಸ್ಟ್ 22 ರಂದು ಧಾರವಾಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)

ವಸತಿ ಸಚಿವ ವಿ. ಸೋಮಣ್ಣ ಅವರು ಆಗಸ್ಟ್ 25 ರಂದು ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಛಾಯಾಚಿತ್ರ ಲಗತ್ತಿಸಿದೆ)

ಕೃಷಿ ಸಚಿವ ಬಿ. ಸಿ. ಪಾಟೀಲ್ ಅವರು ಇಂದು ಅಗ್ರಿ ಸ್ಟಾಟ್‌ಅಪ್ ಸಮ್ಮೇಳನವನ್ನು ಉದ್ಘಾಟಿಸಿದರು.

## ಆರು ಪತ್ರಕರ್ತರ ಕುಟುಂಬಕ್ಕೆ ತಲಾ 5 ಲಕ್ಷ ಮಂಜೂರು ಮಾಡಿದ ಸಿಎಂ ಬಿಎಸ್ ವೈ

ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)

ಕೋವಿಡ್ ಸಂದರ್ಭದಲ್ಲಿ ಮೃತಪಟ್ಟ ಆರು ಜನ ಪತ್ರಕರ್ತರಿಗೆ ತಲಾ 5 ಲಕ್ಷ ರೂ ಪರಿಹಾರವನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಮಂಜೂರು ಮಾಡಿದ್ದಾರೆ.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) ಅಧ್ಯಕ್ಷ ಶಿವಾನಂದ ತಗಡೂರು ನೇತೃತ್ವದಲ್ಲಿ ಭೇಟಿ ಮಾಡಿದ್ದ ಪತ್ರಕರ್ತರ ನಿಯೋಗದ ಮನವಿಗೆ ಸಿಎಂ ಕೂಡಲೇ ಸ್ಪಂದಿಸಿ, ಆದೇಶಿಸಿದ್ದಾರೆ.

ಪತ್ರಕರ್ತರಾದ ಸೋಮಶೇಖರ್ ಯಡವಟ್ಟಿ, ವೀ.ಸಿ.ಹಿರೇಮಠ, ಕೆ.ಎಂ.ಹಾಲಪ್ಪ, ಪರ್ವತಯ್ಯಸ್ವಾಮಿ, ಎಸ್.ಎಚ್.ಜಯಣ್ಣ, ಬಿ.ಎಂ.ತ್ರಿಮೂರ್ತಿ ಅವರ ಕುಟುಂಬಕ್ಕೆ ಸೌಲಭ್ಯ ದೊರೆಯಲಿದೆ.

ಹಿರಿಯ ಪತ್ರಕರ್ತರಾದ ನ.ವಿನಯ್ (ಟಿವಿ 9), ಚಿದಾನಂದ ಪಟೇಲ್ (ಟಿವಿ 18) ಮತ್ತಿತರರು ನಿಯೋಗದಲ್ಲಿದ್ದರು.

## *ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಕನ್ನಡವನ್ನು ಒಂದು ಭಾಷೆಯಾಗಿ ಕಡ್ಡಾಯವಾಗಿ* ಕಲಿಸಬೇಕು

**- ಟಿ.ಎಸ್. ನಾಗಾಭರಣ**

**ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)**

*ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಕನ್ನಡವನ್ನು ಒಂದು ಭಾಷೆಯಾಗಿ ಕಡ್ಡಾಯವಾಗಿ ಕಲಿಸುವುದು ಸರ್ಕಾರದ* ಆದೇಶದನ್ವಯ ಅವುಗಳ ಜವಾಬ್ದಾರಿಯಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ಹೇಳಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕನ್ನಡ ಅನುಷ್ಠಾನದ ಪ್ರಗತಿಯನ್ನು ಜಾಲ ಸಂಪರ್ಕ ಸಭೆಯ ಮೂಲಕ ಪರಿಶೀಲನೆ ನಡೆಸಿ ಮಾತನಾಡಿದ ಅವರು, ವೈದ್ಯಕೀಯ ಶಿಕ್ಷಣ ಅಭ್ಯಾಸ ಮಾಡುವವರು ಕಡ್ಡಾಯವಾಗಿ ಗ್ರಾಮೀಣ ಸೇವೆಯನ್ನು ಮಾಡಬೇಕಿದೆ. ಹಳ್ಳಿಗಳಲ್ಲಿ ಸೇವೆ ಸಲ್ಲಿಸುವವರು ಜನಭಾಷೆಯಲ್ಲಿ ರೋಗಿಗಳನ್ನು ಆತ್ಮೀಯವಾಗಿ ಮಾತನಾಡಿಸಿ ರೋಗಗಳ ಗುಣಾವಶೇಷಗಳನ್ನು ಅರಿತರೆ ಸುಲಭವಾಗಿ ಚಿಕಿತ್ಸೆಯನ್ನು ನೀಡಿ ತಮ್ಮ ಸೇವಾಕಾರ್ಯವನ್ನು ಉತ್ತಮವಾಗಿ ಮಾಡಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ವೃತ್ತಿ ಶಿಕ್ಷಣದಲ್ಲಿ ಕನ್ನಡ ಉಳಿದರೆ; ಬಳಕೆಯಲ್ಲೂ ಕನ್ನಡವನ್ನು ಮೆರೆಸಬಹುದಾಗಿದೆ. ಹಾಗಾಗಿ ವೈದ್ಯಕೀಯ ಶಿಕ್ಷಣ ಕಲಿಯುವ ಕನ್ನಡೇತರರಿಗೂ ವ್ಯವಹಾರಿಕ ಕನ್ನಡವನ್ನು ಶಿಕ್ಷಣ ಹಂತದಲ್ಲೇ ಕಲಿಸುವ ಯೋಜನೆಯನ್ನು ವಿಶ್ವವಿದ್ಯಾಲಯಗಳು ಹಮ್ಮಿಕೊಳ್ಳಬೇಕು. ಜೊತೆಗೆ ಕನ್ನಡದ ವೈದ್ಯಕೀಯ ನಿಘಂಟನ್ನು ಮಾಡಿದರೆ ವೈದ್ಯಶಾಸ್ತ್ರದ ವಿದ್ಯಾರ್ಥಿಗಳಿಗೆ ಅನುಕೂಲವಾಗುವುದರ ಜೊತೆಗೆ ಆ ಜ್ಞಾನದ ತಿಳುವಳಿಕೆಯನ್ನು ಬಯಸುವ ಹೊರ ಜಗತ್ತಿನ ಮನಸ್ಸುಗಳಿಗೂ ಕೂಡ ಅನುಕೂಲವಾಗಲಿದೆ ಎಂದರು.

ದಿನೆ ದಿನೇ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್–19 ಸೇವಾ ಕಾರ್ಯದಲ್ಲಿ ತೊಡಗಿಕೊಂಡಿರುವ ತಮ್ಮೆಲ್ಲಾ ಕೋವಿಡ್ ವಾರಿಯರ್ಸ್ ಗಳಿಗೆ ಕೃತಜ್ಞತೆಗಳನ್ನು ಸಲ್ಲಿಸಿದ ಪ್ರಾಧಿಕಾರದ ಅಧ್ಯಕ್ಷರು, ಇಂತಹ ದುರಿತಕಾಲದಲ್ಲಿ ಸಲ್ಲಿಸುತ್ತಿರುವ ತಮ್ಮ ಸೇವೆ ಪ್ರಶಂಸನೀಯ ಎಂದು ಅಭಿನಂದನೆಗಳನ್ನು ಸಲ್ಲಿಸಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಕನ್ನಡೇತರರು ಶಿಕ್ಷಣವನ್ನು ಪಡೆದುಕೊಳ್ಳುತ್ತಿದ್ದಾರೆ. ಅವರುಗಳಿಗೆಲ್ಲ ಅನುಕೂಲವಾಗುವಂತೆ ಮತ್ತು ಸುಲಭವಾಗಿ ಕನ್ನಡವನ್ನು ಕಲಿಯಲು ಸಹಕಾರಿಯಾಗುವ ನಿಟ್ಟಿನಲ್ಲಿ ಪ್ರತ್ಯೇಕ ಪಠ್ಯಪುಸ್ತಕವನ್ನು ರಚಿಸುವುದು ಮತ್ತು ಬೋಧನಾ ಸಮಯವನ್ನು 40 ಗಂಟೆಗಳ ಅವಧಿಗೆ ಹೆಚ್ಚಿಸುವಂತೆ ತಾಕೀತು ಮಾಡಿದರು.

@ ಕೋವಿಡ್ ವಾರಿಯರ್ಸ್ ಗೆ ಅಭಿನಂದನೆಗಳನ್ನು ಸಲ್ಲಿಸಿದ ಅಧ್ಯಕ್ಷರು

@ ಶಿಕ್ಷಣ ಹಂತದಲ್ಲೆ ಕನ್ನಡ ಕಲಿಕೆ ಕಡ್ಡಾಯ ಮಾಡುವುದು ಅಗತ್ಯ

@ ವೃತ್ತಿ ಶಿಕ್ಷಣದಲ್ಲಿ ಕನ್ನಡ ಉಳಿದರೆ; ಬಳಕೆಯಲ್ಲೂ ಕನ್ನಡವನ್ನು ಮೆರೆಸಬಹುದು

@ಬೋಧನಾ ಸಮಯ ಹೆಚ್ಚಿಸಲು ತಾಕೀತು

@ ವಿವಿಯ ಜಾಲತಾಣವನ್ನು ಸಂಪೂರ್ಣ ಕನ್ನಡೀಕರಣಗೊಳಿಸಲು ಸೂಚನೆ

@ವೈದ್ಯಕೀಯ ನಿಘಂಟು ರಚನೆಗೆ ಸಲಹೆ

@ಕನ್ನಡೇತರರಿಗೆ ವ್ಯವಹಾರಿಕ ಕನ್ನಡ ಕಲಿಸಲು ಸೂಚನೆ

ಮಾನ್ಯ ಮುಖ್ಯಮಂತ್ರಿಗಳ ಇ–ಆಡಳಿತ ಸಲಹೆಗಾರರಾದ ಶ್ರೀ ಬೇಳೂರು ಸುದರ್ಶನ, ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ.ಹಿ.ಚಿ.ಬೋರಲಿಂಗಯ್ಯ, ಪ್ರಾಧಿಕಾರದ ಸದಸ್ಯರಾದ ಡಾ.ವಿಜಯಲಕ್ಷ್ಮಿ ಬಾಳೆಕುಂದ್ರಿ, ಡಾ. ಕಿಶೋರ್, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಡಾ.ವೀರಶೆಟ್ಟಿ, ಗುಲ್ಬರ್ಗಾ, ಡಾ.ಪಿ.ಎಸ್. ಶಂಕರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಸ್.ಸಚ್ಚಿದಾನಂದ, ವಿಶ್ವವಿದ್ಯಾಲಯದ ಕುಲಸಚಿವರಾದ ಶ್ರೀ ಶಿವಾನಂದ ಕಾಪಶಿ, ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯ ಮಾಪನ) ರಾದ ಡಾ.ಕೆ.ಬಿ.ಲಿಂಗೇಗೌಡ, ವಿಶ್ವವಿದ್ಯಾಲಯದ ಉಪಕುಲಸಚಿವರು ಮತ್ತು ಸಮನ್ವಯ ಅಧಿಕಾರಿಗಳಾದ ಡಾ.ಬಿ.ವಸಂತ ಶೆಟ್ಟಿ ಇತರರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಕೆ ಆರ್ ಎಸ್ ಜಲಾಶಯಕ್ಕೆ ಮುಖ್ಯಮಂತ್ರಿಗಳಿಂದ ಬಾಗಿನ

**ಬೆಂಗಳೂರು, ಆಗಸ್ಟ್ 21 (ಕರ್ನಾಟಕ ವಾರ್ತೆ)**

**ಕೆ.ಆರ್. ಎಸ್ ಜಲಾಶಯ ಭರ್ತಿಯಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ ಅವರು ಬಾಗಿನ ಅರ್ಪಿಸಿದರು.**

**ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ| ನಾರಾಯಣಗೌಡ, ಜಲಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್ ಟಿ ಸೋಮಶೇಖರ್, ಶಾಸಕರಾದ ರವೀಂದ್ರ ಶ್ರೀಕಂಠಯ್ಯ, ಪರಿಷತ್ ಸದಸ್ಯರಾದ ಶ್ರೀಕಂಠೇಗೌಡ, ಅಪ್ಪಾಜಿಗೌಡ ಸೇರಿದಂತೆ ಉಪಸ್ಥಿತರಿದ್ದ ಜನಪ್ರತಿನಿಧಿಗಳೂ ಬಾಗಿನ ಅರ್ಪಿಸಿದರು. ಬಳಿಕ ಜಲಾಶಯದ ಕೆಳಭಾಗದಲ್ಲಿರುವ ಕಾವೇರಿ ಪ್ರತಿಮೆಗೆ ಪೂಜೆ ಸಲ್ಲಿಸಿದರು.**

**ಛಾಯಾಚಿತ್ರ ಲಗತ್ತಿಸಿದೆ)**